ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ ದಿನಾಂಕ : DATE : 22/7/20

# ಆನ್‌ಲೈನ್ ಸಭೆ ನಡೆಸಲು ಅವಕಾಶ ನೀಡುವಂತೆ ಎಚ್‌ಕೆಪಿ ಮನವಿ

ಉವಾ 22/7/20



■ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಗೆ ಎಚ್.ಕೆ.ಪಾಟೀಲ್ ಪತ್ರ

ಬೆಂಗಳೂರು: ಕೊರೊನಾ ನಿಯಂತ್ರಿಸಲು ವೈದ್ಯಕೀಯ ಸಲಕರಣೆಗಳ ಖರೀದಿಯಲ್ಲಿ ಅವ್ಯವಹಾರ ನಡೆದಿರುವ ದೂರುಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ಸಭೆ ನಡೆಸುವುದು ಅಗತ್ಯವಿದ್ದು, ಜುಲೈ 28 ರಂದು ಝೂಮ್ ಆ್ಯಪ್ ಮೂಲಕ ಸಭೆ ನಡೆಸಲು ಅವಕಾಶ ಕಲ್ಪಿಸುವಂತೆ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ್ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಗೆ ಮನವಿ ಮಾಡಿದ್ದಾರೆ. ಈ ಕುರಿತು ಪತ್ರ ಬರೆದಿರುವ ಅವರು, ಸಾರ್ವಜನಿಕ ಲೆಕ್ಕಪತ್ರ ಸಮಿತಿ ಮಹತ್ವದ ಸಮಿತಿಯಾಗಿದ್ದು, ಈ ರೀತಿಯ ಅವ್ಯವಹಾರದ ದೂರುಗಳು ಕೇಳಿ ಬಂದಾಗ ಸಮಿತಿ ವಿಮುಖರಾಗಲು ಸಾಧ್ಯವಿಲ್ಲ. ಈ ಸಂದರ್ಭದಲ್ಲಿ ಸಮಿತಿ ಅಧಿಕಾರಿಗಳಿಂದ ಮಾಹಿತಿ ಪಡೆದು ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಶಿಫಾರಸು ಮಾಡುವ ಅಗತ್ಯವಿದೆ. ರಾಜ್ಯ ಸರ್ಕಾರ ಈಗಾಗಲೇ ಇ ಆಡಳಿತ ವ್ಯವಸ್ಥೆ ಜಾರಿಗೆ ತಂದಿದ್ದು ಈ ಸೌಲಭ್ಯವನ್ನು ಬಳಸಿಕೊಂಡು ವೆಬೆಕ್ಸ್ ಅಥವಾ ಝೂಮ್ ಮೂಲಕ ಸಮಿತಿ ಸಭೆ ನಡೆಸಲು ಅಲ್ಲದೇ ಇ ಸ್ಥಳ ವೀಕ್ಷಣೆ ಮಾಡಲು ಯಾವುದೇ ತೊಂದರೆಯಿಲ್ಲ. ಹೀಗಾಗಿ ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ಸಭೆಯನ್ನು ಆನ್‌ಲೈನ್ ಮೂಲಕ ನಡೆಸಲು ಅನುಮತಿ ನೀಡುವಂತೆ ಪತ್ರದಲ್ಲಿ ಮನವಿ ಮಾಡಿದ್ದಾರೆ.